ಆ) ಅಂತರ ರಾಜ್ಯದ ಒಪ್ಪಂದವು ಮುಗಿದ ನಂತರ ಸಾರಿಗೆ ಸೇವೆಯನ್ನು ಪ್ರಾರಂಭಿಸಲಾಗುವುದ.

ಮುಳಬಾಗಿಲು ತಾಲ್ಲೂಕಿಗೆ ವಿದ್ಯುತ್ ಲೈನುಗಳು.

3287 - ಶ್ರೀ ಎಂ.ಡಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಇಂಧನ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವುರೆ?

ಅ) ಮುಳಬಾಗಿಲು ತಾಲ್ಲೂಕಿಗೆ 66 ಕೆ.ವಿ. ವಿದ್ಯುಚ್ಛಕ್ತಿ ಲೈನನ್ನು 1991 ಮಾರ್ಚಿ 31 ರೊಳಗೆ ಪೂರ್ತಿಮಡಿ ವಿದ್ಯುಚ್ಛಕ್ತಿ ಒದಗಿಸುವುದಾಗಿ ವಿಧಾನಸಭೆಯಲ್ಲಿ ಆಶ್ವಾಸನೆ ಕೊಡಲಾಗಿದೆಯೆ?

ಆ) ಹಾಗಿದ್ದಲ್ಲಿ, ಇದುವರಿಗೂ 66ಕೆ.ವಿ.ವಿದ್ಯುಚ್ಛಕ್ತಿ ಒದಗಿಸದಿರುವುದಕ್ಕೆ ಕಾರಣಗಳೇನು?

ಇ) ಈ ರೀತಿಯ ವಿಳಂಭಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಕಾರಣರಾಗಿದ್ದಲ್ಲಿ ಅವರು ಮೇಲೆ ಕಾನೂನು ರೀತ್ಯ ಕ್ರಮ ಕೈಗೊಳ್ಳುವರೆ?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಸಚಿವರು):

ಅ) ಹೌದು.

ಆ) ಕೋಲಾರದಿಂದ ಮುಳಬಾಗಿಲಿಗೆ 66 ಕೆ.ವಿ. ವಿದ್ಯುತ್ ಲೈನಿಗೆ ನಿರ್ಮಾಣ ಕಾರ್ಯವನ್ನು ಮಾರ್ಚಿ 1991ರ ವೇಳಿಗೆ ಪೂರ್ಣಗೊಳಿಸಲು ಯೋಜಿಸಿತ್ತು. ಆದರೆ ಸಾಮಾಗ್ರಿಗಳ ಕೊರತೆಯಿಂದಾಗಿ ಈ ಕಾರ್ಯವನ್ನು ಪೂರ್ಣಗೊಳಿಸುವಲ್ಲಿ ಸ್ವಲ್ಪ ವಿಳಂಭ ಉಂಟಾಯಿತು.ಜೂನ್ 1991ರಲ್ಲಿ ಸದರಿ ವಿದ್ಯುತ್ ಲೈನಿನ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ.

ಇ) ವಿಳಂಬಕ್ಕೆ ಅಧಿಕಾರಿಗಳು ಕಾರಣರಲ್ಲ ಹೀಗಾಗಿ ಅವರ ಮೇಲೆ ಕಾನೂನು ರೀತ್ಯ ಕ್ರಮವನ್ನು ತೆಗೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಮೂಡಿಗೆರೆ ಕ್ಷೇತ್ರದಲ್ಲಿ ಪ್ರಾಂಶುಪಾಲರ ಹುದ್ದೆಗಳು ಖಾಲಿ

3288 - ಶ್ರೀಮತಿ ಮೋಟಮ್ಮ (ಮೂಡುಗೆರೆ) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಡಿಗೆರೆ ವಿಧಾನ ಸಭೆ ಕ್ಷೇತ್ರಕ್ಕೆ ಸೇರಿದ ಅಲ್ದೂರು, ಬಣಕಲ್, ಕಳಸಾ, ಮೂಡಿಗೆರೆ ಜೂನಿಯರ್ ಕಾಲೇಜಿನಲ್ಲಿ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಸರ್ಕಾರ ಎಲ್ಲಿಯವರೆವಿಗೂ ಆ ಹುದ್ದೆಗಳನ್ನು ಭರ್ತಿ ಮಾಡದೆ ಇರಲು ಕಾರಣವೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ಗಮನಕ್ಕೆ ಬಂದಿದೆ.

ಆ) ಭರ್ತಿ ಮಾಡಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗಿದೆ.